**<u>ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.</u>**

**<u>ಕ್ರಿ ಮೊ ಸಂಖ್ಯೆ 2270/2022</u>**

**<u>ಪಿರ್ಯಾದಿಃ</u>** **ಶ್ರೀ ರಾಜಶೇಖರ್**

**-ವಿರುದ್ಧ-**

**<u>ಆರೋಪಿ/ತರುಃ</u>** **ಶ್ರೀ ಶಿವರಾಜ್**

## <u>ದಂಡ ಪ್ರಕ್ರಿಯಾ ಸಂಹಿತೆ ಕಲಂ 313 ರಡಿಯಲ್ಲಿಆರೋಪಿಯ ಹೇಳಿಕೆ</u>

ಪ್ರಶ್ನೆ-1: ನೀವು ಸಾಕ್ಷಿದಾರರ ಸಾಕ್ಷ್ಯದ ಹೇಳಿಕೆಯನ್ನು ಕೇಳಿಸಿಕೊಂಡಿದ್ದೀರಾ?

ಉತ್ತರ: Yes

ಪ್ರಶ್ನೆ-2: ಪಿಡಬ್ಲ್ಯೂ-1. ಶ್ರೀ ರಾಜಶೇಖರ್ ತಮ್ಮ ಸಾಕ್ಷ್ಯದಲ್ಲಿ ಆರೋಪಿಯಾದ ನೀವು ತಮ್ಮ ಗೃಹಕೃತ್ಯದ ಉದ್ದೇಶಕೋಸ್ಕರ ಮತ್ತು ಭದ್ರಾವತಿ ಟೌನ್‌ನಲ್ಲಿ ಮನೆಯನ್ನು ಕಟ್ಟುವ ಉದ್ದೇಶಕೋಸ್ಕರ ದಿನಾಂಕ 23.12.2020 ರಂದು ರೂ.25,00,000/- ಗಳನ್ನು ಸಾಲವಾಗಿ ನಾಲ್ಕು ತಿಂಗಳ ಒಳಗಾಗಿ ವಾಪಸ್ಸು ನೀಡಲು ಒಪ್ಪಿ ಪಡೆದುಕೊಂಡು, ದಿನಾಂಕ 23.04.2021 ರ ದಿನಾಂಕವನ್ನು ನಮೂದಿಸಿ ವಿಜಯ ಬ್ಯಾಂಕ್, ರಂಗೇನಹಳ್ಳಿ ಶಾಖೆಗೆ ಸೇರಿದ ಎರಡು ಚೆಕ್ ಸಂಖ್ಯೆ 572308 ನ್ನು ರೂ.15,00,000/- ಗಳಿಗೆ ಮತ್ತು ಇನ್ನೊಂದು ಚೆಕ್ ಸಂಖ್ಯೆ 572309 ನ್ನು ರೂ.10,00,00-00 ಗಳಿಗೆ ನೀಡಿದ್ದು, ಸದರಿ ಚೆಕ್ಕಿನ ಪೈಕಿ ಚೆಕ್ ಸಂಖ್ಯೆ 572308 ರ ರೂ.15,00,000-00 ನ್ನು ಪಿರ್ಯಾದಿಯು ಬ್ಯಾಂಕ್ ಆಫ್ ಬರೋಡ, ರಂಗೇನಹಳ್ಳಿ, ಶಾಖೆಯಲ್ಲಿ ನಗದೀಕರಣಕ್ಕಾಗಿ ಹಾಜರುಪಡಿಸಿದಾಗ ಸದರಿ ಬ್ಯಾಂಕಿನವರು ಸದರಿ ಚೆಕ್ಕು ಆರೋಪಿಯಾದ ನಿಮ್ಮ

ಖಾತೆಯಲ್ಲಿ '**Account Closed**' ಎಂಬ ಕಾರಣಕ್ಕಾಗಿ ಅಮಾನ್ಯಗೊಂಡಿದೆ ಎಂದು ಹಿಂಬರಹ ನೀಡಿರುತ್ತಾರೆ ಎಂದು ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ ?

ಉತ್ತರಃ False

ಪ್ರಶ್ನೆ-3: ಪಿಡಬ್ಲೂ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಅನಂತರ ಪಿರ್ಯಾದಿಯು ದಿನಾಂಕ 05.05.2021 ರಂದು ವಕೀಲರ ಮೂಲಕ ನೋಟೀಸ್ ನೀಡಿದ್ದು ಅದು ಆರೋಪಿಯಾದ ನಿಮಗೆ ದಿನಾಂಕ 13.05.2021 ರಂದು ತಲುಪಿದ ನಂತರ ದಿನಾಂಕ 21.05.2021 ರಂದು ಅಸಮರ್ಪಕ ಮರು ಉತ್ತರವನ್ನು ನೀಡಿರುತ್ತೀರಿ ಮತ್ತು ಯಾವುದೇ ಹಣವನ್ನು ಮರುಪಾವತಿ ಮಾಡಿರುವುದಿಲ್ಲ ಎಂದು ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ ?

ಉತ್ತರಃ False

ಪ್ರಶ್ನೆ-4: ಪಿಡಬ್ಲೂ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆರೋಪಿಯಾದ ನೀವು ಮೋಸ ಮಾಡುವ ಉದ್ದೇಶದಿಂದ ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲ ಎಂಬ ವಿಚಾರ ತಿಳಿದಿದ್ದರೂ ಸದರಿ ಚೆಕ್ ನ್ನು ತನಗೆ ನೀಡಿರುತ್ತೀರಿ, ನಂತರ ತಾನು ಆರೋಪಿಯಾದ ನಿಮಗೆ ನೋಟೀಸು ನೀಡಿದರೂ ಸಹ ಆರೋಪಿಯಾದ ನೀವು ಸದರಿ ಸಾಲದ ಹಣವನ್ನು ಹಿಂತಿರುಗಿಸಿರುವುದಿಲ್ಲ ಎಂದು ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ ?

ಉತ್ತರ: False

ಪ್ರಶ್ನೆ-5: ನೀವು ಏನಾದರೂ ಹೇಳುವುದಿದೆಯಾ ?

ಉತ್ತರ: Not at this moment

ಪ್ರಶ್ನೆ-6: ಈ ಪ್ರಕರಣದಲ್ಲಿ ನಿಮ್ಮ ಪರ ಸಾಕ್ಷಿ/ಪ್ರತಿರಕ್ಷಣೆ ಏನಾದರೂ ಇದೆಯೇ?

ಉತ್ತರ: Yes

(ಈ ಹೇಳಿಕೆಯನ್ನು ಆರೋಪಿಗೆ ತೆರೆದ ನ್ಯಾಯಾಲಯದಲ್ಲಿ ಕನ್ನಡ ಭಾಷೆಯಲ್ಲಿ ಓದಿ ಹೇಳಿದ್ದು, ಆರೋಪಿಯ ಉತ್ತರನ್ನು ಯಥಾವತ್ತಾಗಿ ದಾಖಲಿಸಿದ್ದೇನೆ.)

ದಿನಾಂಕ: 16.05.2025 **ಸಹಿ/-**

**(ರಾಹುಲ್ ಶೆಟ್ಟಿಗಾರ್)**
**ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ**
**ಪ್ರ.ದ.ನ್ಯಾ.ದಂ., ತರೀಕೆರೆ.**